ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1087 (1400)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು

ವಿಷಯ : ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಕುಡಿಯುವ ನೀರು, ರಸ್ತೆ, ಒಳಚರಂಡಿ ಹಾಗೂ ಇತರೆ ಮೂಲಭೂತ ಸೌಲಭ್ಯಗಳ ಬಗ್ಗೆ

(ಅ) ಬೆಳ್ಳೂರು ಪಟ್ಟಣ ಪಂಚಾಯಿತಿ ಹೊಸದಾಗಿ ರಚನೆಯಾಗಿರುವುದರಿಂದ ಈ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಕುಡಿಯುವ ನೀರು, ರಸ್ತೆ, ಒಳಚರಂಡಿ ಹಾಗೂ ಇತರೆ ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಯೋಜನೆಯನ್ನು ರೂಪಿಸಲಾಗಿದೆಯೇ;

(ಇ) ಯೋಜನೆ ರೂಪಿಸಿದ್ದಲ್ಲಿ, ಯೋಜನಾ ವೆಚ್ಚ ಎಷ್ಟು; ಕಾಮಗಾರಿ ಯಾವಾಗ ಪ್ರಾರಂಭವಾಗುವುದು ? (ಸಂಪೂರ್ಣ ವಿವರ ನೀಡುವುದು)